ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 14–09–2021

# ಪತ್ರಿಕಾ ಪ್ರಕಟಣೆ

**PRESS RELEASE**

## ವಿಧಾನ ಸಭೆಯಲ್ಲಿ ಅಗಲಿದ ಗಣ್ಯರಿಗೆ ಸಂತಾಪ

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ)

ಇಂದು ವಿಧಾನಸಭೆಯ ಅಧಿವೇಶನದ ಪ್ರಾರಂಭದಲ್ಲಿ ನಿನ್ನೆ ನಿಧನರಾದ ರಾಜ್ಯ ಸಭೆಯ ಹಾಲಿ ಸದಸ್ಯ ಹಾಗೂ ಕೇಂದ್ರದ ಮಾಜಿ ಸಚಿವ ಆಸ್ಕರ್ ಫರ್ನಾಂಡಿಸ್ ಹಾಗೂ ಇತ್ತೀಚೆಗೆ ನಿಧನರಾದ ರಾಷ್ಟ್ರ ಪ್ರಶಸ್ತಿ ವಿಜೇತ ಹಾಗೂ ಚಿತ್ರನಟ ಬಿ.ವಿಜಯ್ ಕುಮಾರ್ (ಸಂಚಾರಿ ವಿಜಯ್) ಅವರಿಗೆ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗೆಡೆ ಕಾಗೇರಿ ಅವರು ಸಂತಾಪ ಸೂಚನೆ ಮಂಡಿಸಿದರು.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಂತಾಪ ಸೂಚನೆಗೆ ಧ್ವನಿ ಗೂಡಿಸಿ, ಆಸ್ಕರ್ ಫರ್ನಾಂಡಿಸ್ ಅವರು ವಿಭಿನ್ನ ಅಪರೂಪದ ರಾಜಕಾರಣಿಯಾಗಿದ್ದು, ಅತ್ಯಂತ ಸರಳ ಮತ್ತು ಸ್ವಚ್ಛ ರಾಜಕಾರಣವನ್ನೇ ಅವರ ಜೀವನದುದ್ದಕ್ಕೂ ನಡೆಸಿಕೊಂಡು ಬಂದಿದ್ದಾರೆ.

ನಮ್ಮಲ್ಲಿದ್ದ ಆದರ್ಶಗಳು ಪರಿಸ್ಥಿತಿಗೆ ಅನುಗುಣವಾಗಿ ಬದಲಾಗುತ್ತವೆ ಆದರೆ ಶ್ರೀಯತರು ಉಡುಪಿಯಲ್ಲಿದ್ದಾಗಲೂ ಹಾಗೂ ದೆಹಲಿಗೆ ಹೋದಾಗಲು ಒಂದೇ ರೀತಿ ಇದ್ದರು. ಇವರಿಂದ ಕರ್ನಾಟಕದ ಪ್ರಗತಿಗೆ ಬಹಳ ಸಹಾಯವಾಗಿದೆ. ಅಜಾತಶತ್ರುವಾಗಿದ್ದ ಇವರು ಯಾರ ಮನಸ್ಸನ್ನು ನೋಯಿಸಿಲ್ಲ ಎಂದು ಗುಣಗಾನ ಮಾಡಿದರು.

ಇತ್ತೀಚೆಗೆ ನಿಧನರಾದ ರಾಷ್ಟ್ರ ಪ್ರಶಸ್ತಿ ವಿಜೇತ ಹಾಗೂ ಚಿತ್ರನಟ ಬಿ.ವಿಜಯ್ ಕುಮಾರ್ ಸಣ್ಣ ವಯಸ್ಸಿನಲ್ಲಿ ಬಹಳ ಸಾಧನೆ ಮಾಡಿದವರು. ರಂಗಭೂಮಿಯಲ್ಲಿ ಬಹಳಷ್ಟು ಕೆಲಸ ಮಾಡಿ ಅನುಭವ ಪಡೆದು ಸಂಗೀತದಲ್ಲೂ ಸಾಧನೆ ಮಾಡಿದ್ದರು. ನಾನು ಅವನಲ್ಲ ಅವಳು ಚಿತ್ರದಲ್ಲಿ ಮುಂಗಳಮುಖಿಯ ಪಾತ್ರದಲ್ಲಿ ನಟಿಸಿ ರಾಷ್ಟ್ರ ಪ್ರಶಸ್ತಿ ಪಡೆದ ಇವರ ಅಗಲಿಕೆ ಚಿತ್ರರಂಗಕ್ಕೆ ತುಂಬಲಾರದ ನಷ್ಟವಾಗಿದೆ ಎಂದರು.
ಸದನದಲ್ಲಿ ಅಗಲಿದ ಗಣ್ಯರಿಗೆ ಒಂದು ನಿಮಿಷಗಳ ಮೌನಾಚರಣೆ ಸಲ್ಲಿಸಿದ ನಂತರ ಮುಖ್ಯಮಂತ್ರಿಗಳು ನೂತನ ಸಚಿವರನ್ನು ಸದನಕ್ಕೆ ಪರಿಚಯಿಸಿದರು.

## ರಾಜಕಾಲುವೆ ಕಾಮಗಾರಿಯನ್ನು ಮಾರ್ಚ್–22 ಕ್ಕೆ ಪೂರ್ಣಗೊಳಿಸಲಾಗುವುದು : ಬಸವರಾಜ ಬೊಮ್ಮಾಯಿ

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ):

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ವಿಜಯನಗರ ವಾರ್ಡ್ ನಂ. 123 ರ ಪೈಪ್‌ನಲ್ಲಿ ಹಾದು ಹೋಗಿರುವ ರಾಜಕಾಲುವೆಯ ಕಾಮಗಾರಿಯನ್ನು ಮಾರ್ಚ್–2022 ಕ್ಕೆ ಪೂರ್ಣಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಅವರು ಇಂದು ವಿಧಾನಸಭೆಯ ಪ್ರಶ್ನೋತ್ತರವೇಳೆಯಲ್ಲಿ ವಿಧಾನಸಭೆಯ ಸದಸ್ಯ ರಾಮಲಿಂಗಾ ರೆಡ್ಡಿ ಅವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ರಾಜಕಾಲುವೆಯ ಕಾಮಗಾರಿಯಲ್ಲಿ ಸುಮಾರು 515 ಮೀಟರ್ ನಷ್ಟು 1400 ಎಂ.ಎಂ ವ್ಯಾಸದ ಆರ್.ಸಿ.ಸಿ. ಕೊಳವೆಗಳನ್ನು ಅಳವಡಿಸಬೇಕಾಗಿದ್ದು, ಈಗಾಗಲೇ ಸುಮಾರು 380 ಮೀಟರ್‌ನಷ್ಟು ಕೊಳವೆಗಳನ್ನು ಅಳವಡಿಸಲಾಗಿದ್ದು, ಬಾಕಿ ಉಳಿದಿರುವ 135 ಮೀಟರ್‌ನಷ್ಟು ಕೊಳವೆ ಮಾರ್ಗ ಅಳವಡಿಸುವುದು ಪ್ರಗತಿಯಲ್ಲಿದೆ.

ಸದರಿ ಕಾಮಗಾರಿಯನ್ನು ಜನವರಿ 2021 ರೊಳಗೆ ಪೂರ್ಣಗೊಳಿಸಲು ಕಾಲಾವಧಿ ನಿಗದಿಪಡಿಸಲಾಗಿತ್ತು. ಕೋವಿಡ್ 19ರ ಲಾಕ್‌ಡೌನ್‌ನಿಂದ ಸರಕುಗಳು ಮತ್ತು ಸೇವೆಗಳ ಸರಬರಾಜು ವ್ಯವಸ್ಥೆಯಲ್ಲಿ ವ್ಯತ್ಯಯ ಉಂಟಾದ ಹಿನ್ನೆಲೆಯಲ್ಲಿ ಕಾಮಗಾರಿ ವಿಳಂಬವಾಗಿದೆ ಎಂದು ವಿವರಣೆ ನೀಡಿದರು.

ವಿಜಯನಗರ ವಾರ್ಡ್ ವ್ಯಾಪ್ತಿಯ ಪೈಪ್ ಲೈನ್‌ನಲ್ಲಿ ಹಾದುಹೋಗಿರುವ ರಾಜಕಾಲುವೆಯಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿಯ ವತಿಯಿಂದ ಒಳಚರಂಡಿ ಪೈಪ್ ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿರುವುದನ್ನು ಹೊರತುಪಡಿಸಿ, ಉಳಿದ ಕಡೆ ವಾರ್ಷಿಕ ನಿರ್ವಹಣೆ ಗುತ್ತಿಗೆದಾರರಿಂದ ಹೂಳನ್ನು ತೆಗೆಯಲು ಸೂಚನೆ ನೀಡಲಾಗಿದೆ. ಒಳಚರಂಡಿ ಪೈಪ್ ಅಳವಡಿಸುವ ಕಾಮಗಾರಿ ಪ್ರಗತಿಯಲ್ಲಿರುವುದರಿಂದ ಮಳೆಗಾಲದಲ್ಲಿ ಅಕ್ಕಪಕ್ಕದ ನಿವಾಸಿಗಳ ಮನೆಗಳಿಗೆ ನೀರು ನುಗ್ಗುತ್ತಿದ್ದು, ಸದರಿ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲಾಗುವುದು ಎಂದು ಮುಖ್ಯಮಂತ್ರಿಗಳು ಸದನಕ್ಕೆ ಮಾಹಿತಿ ನೀಡಿದರು.

## ಡಿಸೆಂಬರ್ ಅಂತ್ಯಕ್ಕೆ 3 ಲಕ್ಷ ಎಲ್.ಇ.ಡಿ ಬೀದಿ ದೀಪ ಅಳವಡಿಸಲಾಗುವುದು : ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

**ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ):**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 198 ವಾರ್ಡ್‌ಗಳಲ್ಲಿ ವಿದ್ಯುತ್ ಉಳಿತಾಯ ಕ್ರಮಗಳನ್ನು ಅನುಷ್ಠಾನಗೊಳಿಸುವ ಉದ್ದೇಶದಿಂದ ಡಿಸೆಂಬರ್ ಅಂತ್ಯಕ್ಕೆ 3 ಲಕ್ಷ ಎಲ್.ಇ.ಡಿ ಬೀದಿ ದೀಪ ಅಳವಡಿಸಲು ತೀರ್ಮಾನಿಸಲಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಅವರು ಇಂದು ವಿಧಾನಸಭೆಯ ಪ್ರಶ್ನೋತ್ತರವೇಳೆಯಲ್ಲಿ ವಿಧಾನಸಭೆಯ ಸದಸ್ಯ ಆರ್. ಮುಂಜುನಾಥ್ ಅವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ಪಾಲಿಕೆಯಲ್ಲಿರುವ ಒಟ್ಟು 4,85,246 ಬೀದಿ ದೀಪಗಳನ್ನು ಒಟ್ಟು 5 ಹಂತಗಳಲ್ಲಿ 30 ತಿಂಗಳ ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲಾಗುವುದು ಎಂದು ಸದನದಲ್ಲಿ ವಿವರಿಸಿದರು.

## ಕೆರೆಗಳ ಅಭಿವೃದ್ಧಿಗೆ ಕ್ರಮ : ಜೆ.ಸಿ. ಮಾಧುಸ್ವಾಮಿ

**ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ):**

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು 203 ಸಣ್ಣ ನೀರಾವರಿ ಕೆರೆಗಳಿದ್ದು, ಕೆರೆ ಸಂಜೀವಿನಿ ಕಾರ್ಯಕ್ರಮದಡಿ ಕೆರೆಯಂಗಳದ ಹೂಳನ್ನು ತೆಗೆದು ಕೆರೆಗಳನ್ನು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಸಣ್ಣ ನೀರಾವರಿ ಸಚಿವ ಜೆ.ಸಿ. ಮಾಧುಸ್ವಾಮಿ ತಿಳಿಸಿದರು.

ಅವರು ಇಂದು ವಿಧಾನಸಭೆಯ ಪ್ರಶ್ನೋತ್ತರವೇಳೆಯಲ್ಲಿ ವಿಧಾನಸಭೆಯ ಸದಸ್ಯ ವಿ.ಮುನಿಯಪ್ಪ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಹೆಚ್‌ಎನ್ ವ್ಯಾಲಿ ಯೋಜನೆಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ 44 ಕೆರೆಗಳಲ್ಲಿ ಹೂಳನ್ನು ತೆಗೆದು ಕೆರೆಗಳನ್ನು ಅಭಿವೃದ್ಧಿಪಡಿಸಲಾಗುತ್ತಿದ್ದು ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ಹೆಚ್.ಎನ್.ವ್ಯಾಲಿ ಯೋಜನೆಯಲ್ಲಿ ದ್ವಿತೀಯ ಹಂತದಲ್ಲಿ ಸಂಸ್ಕರಿಸಿದ ನೀರನ್ನು 65 ಕೆರೆಗಳಿಗೆ ನೀರನ್ನು ತುಂಬಿಸಲು ಯೋಜನೆ ರೂಪಿಸಲಾಗಿದ್ದು, ಚಿಕ್ಕಬಳ್ಳಾಪುರ ಜಿಲ್ಲೆಗೆ ಒಟ್ಟು 44 ಕೆರೆಗಳಿಗೆ ನೀರು ಹರಿಸಲು ಯೋಜನೆ ರೂಪಿಸಲಾಗಿದ್ದು, ಈಗಾಗಲೇ 26 ಕೆರೆಗಳಿಗೆ ನೀರನ್ನು ಹರಿಸಲಾಗುತ್ತಿದ್ದು, ಉಳಿದ ಕೆರೆಗಳಿಗೆ ಹಂತ ಹಂತವಾಗಿ ನೀರು ಹರಿಸಲಾಗುವುದು.

ಹೆಚ್.ಎನ್.ವ್ಯಾಲಿ ಯೋಜನೆಯಲ್ಲಿ 5 ಪಂಪ್‌ಹೌಸ್ ಕಾಮಗಾರಿಗಳು ಮತ್ತು 137.00 ಕಿ.ಮೀ ಪೈಪ್‌ಲೈನ್ ಕಾಮಗಾರಿಯು ಪೂರ್ಣಗೊಂಡಿದೆ. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯವರು ಈ ಯೋಜನೆಗೆ 210 ಎಂ.ಎಲ್.ಡಿ ನೀರನ್ನು ಒದಗಿಸುವುದಾಗಿ ತಿಳಿಸಿದ್ದು, ಈ ಪೈಕಿ ಪ್ರಸ್ತುತ 90 ಎಂ.ಎಲ್.ಡಿ ನೀರನ್ನು ಮಾತ್ರ ಒದಗಿಸುತ್ತಿದ್ದು, ಪೂರ್ಣ ಪ್ರಮಾಣದಲ್ಲಿ ನೀರನ್ನು ನೀಡಿದ ನಂತರದ ಮೂರು ತಿಂಗಳ ಅವಧಿಯೊಳಗೆ ಯೋಜಿಸಿರುವ ಎಲ್ಲಾ ಕೆರೆಗಳಿಗೆ ನೀರನ್ನು ಹರಿಸಲು ಕ್ರಮಕೈಗೊಳ್ಳಲಾಗುವುದು ಎಂದರು.

## ವಿಸ್ತೀರ್ಣ ಮತ್ತು ಜನಸಂಖ್ಯೆ ಆಧಾರದ ಮೇಲೆ ಪುರಸಭೆಗಳಿಗೆ ಅನುದಾನ ಬಿಡುಗಡೆ.

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ)

ಒಟ್ಟು ವಿಸ್ತೀರ್ಣ ಹಾಗೂ ಜನಸಂಖ್ಯೆಯನ್ನು ಆಧರಿಸಿ ಪುರಸಭೆಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವ ಎನ್. ನಾಗರಾಜು (ಎಂ.ಟಿ.ಬಿ) ಅವರು ಸದನದಲ್ಲಿ ತಿಳಿಸಿದರು.

ಇಂದು ವಿಧಾನಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂ19 (350) ಪುರಸಭೆಗಳಲ್ಲಿ ಅನುದಾನದ ಕೊರತೆಯಿಂದ ವಾರ್ಡ್‌ಗಳ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿದ್ದು, ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಪ್ರಸ್ತಾಪಿಸಿದಾಗ ಉತ್ತರಿಸಿದ ಸಚಿವರು, ಪುರಸಭೆ ವಾರ್ಡ್ ಅಭಿವೃದ್ಧಿಗಾಗಿ ಪ್ರತ್ಯೇಖವಾಗಿ ಅನುದಾನ ಬಿಡುಗಡೆಗೊಳಿಸಲಾಗುವುದಿಲ್ಲ. ಪುರಸಭೆಗಳಿಗೆ ಲಭ್ಯವಿರುವ ಅನುದಾನದಲ್ಲಿ ಅಥವಾ ಸ್ವಂತ ಸಂಪನ್ಮೂಲಗಳಿಂದ ಪುರಸಭೆಯ ವಾರ್ಡ್‌ಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೌನ್ಸಿಲ್ ಅನುಮೋದನೆ ಪಡೆದು ಅನಷ್ಠಾನಿಸಲು ಅವಕಾಶವಿರುತ್ತದೆ. ರಾಜ್ಯದ ಪುರಸಭೆಗಳ ಅಭಿವೃದ್ಧಿಗೆ ಈಗಾಗಲೇ ಸರ್ಕಾರದ ವಿವಿಧ ಯೋಜನೆಗಳಿಂದ ಅನುದಾನ ಒದಗಿಸಿ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

2018-19ರಿಂದ 2020-21ನೇ ಸಾಲಿನ ವರೆಗೆ ಎಸ್.ಎಫ್.ಸಿ ಮುಕ್ತನಿಧಿ ಯೋಜನೆಯಡಿ ರೂ. 30208.50 ಲಕ್ಷ, ಕುಡಿಯುವ ನೀರು ಯೋಜನೆಯಡಿ ರೂ 5675.37 ಲಕ್ಷ ಹಾಗೂ ಎಸ್.ಎಫ್.ಸಿ ವಿಶೇಷ ಅನುದಾನ ಯೋಜನೆಯಡಿ 13413.85 ಲಕ್ಷ ರೂಗಳ ಅನುದಾನವನ್ನು ಪುರಸಭೆಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಬಿಡುಗಡೆ ಮಾಡಲಾಗಿದೆ.

ಸ್ವಚ್ಛ ಭಾರತ್ ಮಿಷನ್ (ನಗರ) ಯೋಜನೆಯ ಮಾರ್ಗಸೂಚಿಗಳನ್ವಯ ವೈಯಕ್ತಿಕ ಶೌಚಾಲಯ ನಿರ್ಮಾಣ, ಸಮುದಾಯ / ಸಾರ್ವಜನಿಕ ಶೌಚಾಲಯಗಳ ನಿರ್ಮಾಣ ಐ.ಇ.ಸಿ ಮತ್ತು ಘನತ್ಯಾಜ್ಯ ವಸ್ತು ನಿರ್ವಹಣೆ ಘಟಕಗಳನ್ನು ಅಭಿವೃದ್ಧಿಪಡಿಸಲು ಪುರಸಭೆಗಳಿಗೆ ರೂ 191.15 ಕೋಟಿಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ.

ರಾಜ್ಯದ ಪುರಸಭೆಗಳಿಗೆ 14ನೇ ಹಣಕಾಸು ಆಯೋಗದ ಅನುದಾನದಡಿ 5 ವರ್ಷಗಳ ಅವಧಿಗೆ (2015-16 ರಿಂದ 2019-20ರ ವರೆಗೆ) ಒಟ್ಟು ಅನುದಾನ ರೂ. 894.15 ಕೋಟಿ ಬಿಡುಗಡೆಗೊಳಿಸಲಾಗಿದೆ. 15ನೇ ಹಣಕಾಸು ಆಯೋಗದಲ್ಲಿ 2020-21ನೇ ಸಾಲಿನಲ್ಲಿ ರೂ 238.64 ಕೋಟಿಗಳನ್ನು ಹಂಚಿಕೆ ಮಾಡಿ ಬಿಡುಗಡೆಗೊಳಿಸಲಾಗಿದೆ. ಹಾಗೂ 2021-22ನೇ

ಸಾಲಿಗೆ ರೂ 178.33 ಕೋಟಿ ಹಂಚಿಕೆ ಮಾಡಿ ಮೊದಲನೆಯ ಕಂತಿನ ಅನುದಾನ ರೂ 35.66 ಕೋಟಿಗಳನ್ನು ಈಗಾಗಲೇ ಬಿಡುಗಡೆಗೊಳಿಸಲಾಗಿದೆ ಎಂದು ಸದನದಲ್ಲಿ ತಿಳಿಸಿದರು.

ನಗರೋತ್ಥಾನ (ಮುನಿಸಿಪಾಲಿಟಿ) – 3ನೇ ಹಂತದ ಯೋಜನೆಯಡಿ ರಾಜ್ಯದ 115 ಪುರಸಭೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರವು 2016–17ನೇ ಸಾಲಿನಲ್ಲಿ ರೂ 629.87 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ ಹಾಗೂ 4ನೇ ಹಂತದ ಅನುದಾನವನ್ನು ಬಿಡುಗಡೆ ಮಾಡಬೇಕಾಗಿದೆ ಎಂದು ಸಚಿವರು ಸದನದಲ್ಲಿ ತಿಳಿಸಿದರು.

## ಮೈಸೂರು ಲ್ಯಾಂಪ್ಸ್ ಕಾರ್ಖಾನೆಯ ಜಾಗದಲ್ಲಿ ಆಸ್ಪತ್ರೆ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ

**– ಸಚಿವ ಮುರಗೇಶ್ ರುದ್ರಪ್ಪ ನಿರಾಣಿ**

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ)

ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ದಿ. ಮೈಸೂರು ಲ್ಯಾಂಪ್ಸ್ ವರ್ಕ್ಸ್‌ಲಿಮಿಟೆಡ್ ಕಾರ್ಖಾನೆಯ ಜಾಗದಲ್ಲಿ ಕರ್ನಾಟಕದ ಸಂಸ್ಕೃತಿಯನ್ನು ಬಿಂಬಿಸುವ ಮತ್ತು ಬೆಂಗಳೂರು ನಗರದ ಹೃದಯಭಾಗದಲ್ಲಿ ಹಸಿರು ವಾತಾವರಣವನ್ನು ಕಾಪಾಡುವ ವಿನೂತನ ಯೋಜನೆಯಾದ "Experience Bengaluru Project" ನ್ನು ಅನುಷ್ಠಾನಗೊಳಿಸಲಾಗುವುದು. ಈ ಜಾಗದಲ್ಲಿ ಯಾವುದೇ ಆಸ್ಪತ್ರೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಮುರಗೇಶ್ ರುದ್ರಪ್ಪ ನಿರಾಣಿ ಅವರು ಸದನದಲ್ಲಿ ತಿಳಿಸಿದರು.

ಇಂದು ವಿಧಾನಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂ 20 (325) ಬೆಂಗಳೂರಿನ ಮೈಸೂರು ಲ್ಯಾಂಪ್ಸ್ ಕಾರ್ಖಾನೆಯ ಜಾಗದಲ್ಲಿ ಆಸ್ಪತ್ರೆ ನಿರ್ಮಿಸುವ ಸಂಬಂಧ ಕಳೆದ ಅಧಿವೇಶನದಲ್ಲಿ ಚರ್ಚೆಯಾಗಿದ್ದು, ಇದರ ಸಂಬಂಧ ಕೈಗೊಂಡಿರುವ ಕ್ರಮದ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈ ಜಾಗದಲ್ಲಿ ಕರ್ನಾಟಕದ ಸಂಸ್ಕೃತಿಯನ್ನು ಬಿಂಬಿಸುವ ಯೋಜನೆಯನ್ನು ಯೋಜಿಸಲಾಗಿದೆ. ಇದರಿಂದ ನಮ್ಮ ಕರ್ನಾಟಕದ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೂ ತಿಳಿಸಬೇಕಾಗಿದೆ. ಈಗಾಗಲೇ "Bangaluru Heritage and Environment Trust" ಹೆಸರಿನಲ್ಲಿ ಸಾರ್ವಜನಿಕ ದತ್ತಿ ಸಂಸ್ಥೆಯನ್ನು ನೊಂದಣಿ ಮಾಡಲಾಗಿದ್ದು, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಅಧ್ಯಕ್ಷರಾಗಿರುತ್ತಾರೆ. ಅಲ್ಲದೆ ರಾಜ್ಯದ ಹಿರಿಯ ಐ.ಎ.ಎಸ್ ಅಧಿಕಾರಿಗಳು ಈ ಟ್ರಸ್ಟ್‌ನಲ್ಲಿ ಇರುತ್ತಾರೆ. ಕರ್ನಾಟಕದ ಸಂಸ್ಕೃತಿಯನ್ನು ಬಿಂಬಿಸುವ ಮತ್ತು ಬೆಂಗಳೂರು ನಗರದ ಹಸಿರು ವಾತವರಣವನ್ನು ಕಾಪಾಡುವ ನಿಟ್ಟಿನಲ್ಲಿ ಕೈಜೋಡಿಸಲು ವಿನೂತನ ಯೋಜನೆಗೆ ಅವರ ಅನುಭವ ಮತ್ತು ಸೇವೆಯನ್ನು ಪಡೆಯಲು ಖಾಸಗಿ ವ್ಯಕ್ತಿಗಳನ್ನು ಸದಸ್ಯರನ್ನಾಗಿ ಮಾಡಲಾಗಿದೆ ಎಂದು ತಿಳಿಸಿದರು.

ಸದರಿ ಟ್ರಸ್ಟ್ ಸರ್ಕಾರದ ಅಧೀನ ಸಂಸ್ಥೆಯಾಗಿರುತ್ತದೆಯೇ ಹೊರತು ಈ ಕಾರ್ಖಾನೆಯ ಜಾಗವನ್ನು ಯಾವುದೇ ಖಾಸಗಿ ವ್ಯಕ್ತಿಗಳಿಗೆ ವರ್ಗಾಯಿಸುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ಸಚಿವರು ಸದನದಲ್ಲಿ ತಿಳಿಸಿದರು.

## ಅಂಗನವಾಡಿ ಕಟ್ಟಡಗಳಲ್ಲಿ ಮೂಲಸೌಕರ್ಯಕ್ಕೆ ಕ್ರಮ

**– ಸಚಿವ ಆಚಾರ ಹಾಲಪ್ಪ ಬಸಪ್ಪ**

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ)

ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಕ್ರಮ ವಹಿಸಲಾಗುವುದು ಎಂದು ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವ ಆಚಾರ ಹಾಲಪ್ಪ ಬಸಪ್ಪ ಅವರು ಸದನದಲ್ಲಿ ತಿಳಿಸಿದರು.

ಇಂದು ವಿಧಾನಪರಿಷತ್ತಿನ ಪ್ರಶ್ನೋತ್ತರ ಕಲಾಪದ ವೇಳೆ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂ 295 ರ ರಾಜ್ಯದಲ್ಲಿ ಸ್ವಂತ ಕಟ್ಟಡ ಹೊಂದಿರುವ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳು ಮತ್ತು ಆ ಕಟ್ಟಡಗಳಲ್ಲಿ ಮೂಲಸೌಕರ್ಯ ಹೊಂದಿರುವ ಬಗ್ಗೆ ಕೇಳಲಾದ ಪ್ರಶ್ನೆಗೆ ಮಾಹಿತಿ ನೀಡಿದ ಸಚಿವರು, ರಾಜ್ಯದಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಡಿ ಒಟ್ಟು 65911 ಅಂಗನವಾಡಿ  ಕೇಂದ್ರಗಳ ಪೈಕಿ 45314 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳಲ್ಲಿ, 11568 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ, 1081 ಅಂಗನವಾಡಿ ಕೇಂದ್ರಗಳು ಪಂಚಾಯತ್ ರಾಜ್‌ಕಟ್ಟಡಗಳಲ್ಲಿ, 2744 ಸಮುದಾಯ ಭವನಗಳಲ್ಲಿ , 92 ಯುವಕ ಮಂಡಲ, 44 ಯುವತಿ ಮಂಡಲ, 4194 ಶಾಲಾ ಕಟ್ಟಡಗಳಲ್ಲಿ ಹಾಗೂ 874 ಇತರೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ.

ರಾಜ್ಯ ಯೋಜನೆಯ ನಗರ ಪ್ರದೇಶಗಳಲ್ಲಿ 450 ಅಂಗನವಾಡಿ ಕೇಂದ್ರಗಳ ಪೈಕಿ 3 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳಲ್ಲಿ, 370 ಬಾಡಿಗೆ ಕಟ್ಟಡಗಳಲ್ಲಿ, 8 ಬಿ.ಬಿ.ಎಂ.ಪಿ. ಕಟ್ಟಡಗಳಲ್ಲಿ, 19 ಸಮುದಾಯ ಭವನಗಳಲ್ಲಿ, 2 ಕೊಳಚೆ ನಿರ್ಮೂಲನಾ ಮಂಡಳಿ ಕಟ್ಟಡದಲ್ಲಿ, 26 ಶಾಲಾ ಕಟ್ಟಡಗಳಲ್ಲಿ, 1 ಬಿಡಬ್ಲ್ಯೂಎಸ್ಎಸ್‌ಬಿ ಕಟ್ಟಡದಲ್ಲಿ ಹಾಗೂ 21 ಇತರೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸತ್ತಿವೆ.

ರಾಜ್ಯದಲ್ಲಿರುವ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಲ್ಲಿ ಮೂಲಸೌಕರ್ಯಕ್ಕೆ ಆದ್ಯತೆ ನೀಡಲಾಗಿದ್ದು, ಮೂಲಸೌಕರ್ಯ ಹೊಂದಿಲ್ಲದ ಅಂಗನವಾಡಿ ಕೇಂದ್ರಗಳಿಗೆ ಕೂಡಲೇ ಅಗತ್ಯ ಮೂಲಸೌಕರ್ಯ ಕಲ್ಪಿಸುವ ವ್ಯವಸ್ಥೆಗೆ ಕ್ರಮವಹಿಸಲಾಗುವುದು ಎಂದು ಸಚಿವರು ತಿಳಿಸಿದರು.

## ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಬೋಧಕರಿಗೆ ವೇತನ ಬಿಡುಗಡೆ

**– ಸಚಿವ ಡಾ.ಸಿ.ಎನ್. ಅಶ್ವತ್ಥನಾರಾಯಣ**

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ)

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಬೋಧಕರಿಗೆ ಸಂಭಾವನೆ ಪಾವತಿಸುವ ಹಾಗೂ ಇತರೆ ವೇತನೇತರ ಭತ್ಯೆ ವೆಚ್ಚಗಳಿಗೆ 2021-22ನೇ ಸಾಲಿನ ಒಂದನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಿ ಆದೇಶ ಹೊರಡಿಸಲಾಗಿದೆ ಎಂದು ಮಾನ್ಯ ಉನ್ನತ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ  ಡಾ. ಸಿ.ಎನ್. ಅಶ್ವತ್ಥ ನಾರಾಯಣ ತಿಳಿಸಿದರು.

ವಿಧಾನ ಪರಿಷತ್ತಿನ ಸದಸ್ಯರಾದ ಎಸ್.ವ್ಹಿ. ಸಂಕನೂರ ಅವರು ಶೂನ್ಯವೇಳೆ  ಪ್ರಸ್ತಾಪಿಸಲಾದ ಪ್ರಶ್ನೆ ರಾಜ್ಯದ ಸುಮಾರು 300 ಸರ್ಕಾರಿ ಐ.ಟಿ.ಐ ಸಂಸ್ಥೆಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವ ಸುಮಾರು 1000 ಸಿಬ್ಬಂದಿಗೆ 2021ರ ಮಾರ್ಚ್, ಏಪ್ರಿಲ್, ಜುಲೈ ಹಾಗೂ ಆಗಸ್ಟ್ ಒಟ್ಟು 4 ತಿಂಗಳ ವೇತನ ಬಿಡುಗಡೆಯಾಗಿರುವುದಿಲ್ಲ, ಇದರಿಂದ ಸಿಬ್ಬಂದಿ ಸಾಕಷ್ಟು ಆರ್ಥಿಕ ತೊಂದರೆ ಆಗಿರುವುದು ಅಲ್ಲದೇ ಕೋವಿಡ್ ಸಂಕಷ್ಟ ಕಾಲದಲ್ಲಿ ಜೀವನ ಸಾಗಿಸುವುದು ದುಸ್ತರವಾಗಿದೆ. ಈ ಕುರಿತು

ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರಿಗೆ ಮತ್ತು ಮೇಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವ ಪ್ರಯೋಜನವಾಗಿಲ್ಲ. ಅದ್ದರಿಂದ ಕೂಡಲೇ ವೇತನ ಬಿಡುಗಡೆಗಾಗಿ ನಿರ್ದೇಶಕರು ಹಾಗೂ ಆಯುಕ್ತರಿಗೆ ವೇತನ ಬಿಡುಗಡೆ ಮಾಡಲು ನಿರ್ದೇಶನ ನೀಡಲು ಪ್ರಸ್ತಾಪಿಸಿದರು.

ಇದಕ್ಕೆ ಸ್ಪಂದಿಸಿದ ಸಚಿವರು, ಈಗಾಗಲೇ ದಿನಾಂಕ: 13-09-2021ರಂದು ಸರ್ಕಾರಿ ಕೈಗಾರಿಕಾ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ವೇತನ ಪಾವತಿಗಾಗಿ ಅನುದಾನವನ್ನು ಬಿಡುಗಡೆ ಮಾಡಿ ಆದೇಶ ಹೊರಡಿಸಲಾಗಿದೆ. ಆದರೆ ಕೋವಿಡ್ ನಿರ್ಬಂಧದ ಅವಧಿಯಲ್ಲಿ ಅತಿಥಿ ಬೋಧಕರು ಕಾರ್ಯ ನಿರ್ವಹಿಸಿಲ್ಲದ ಕಾರಣ ಗೌರವಧನವನ್ನು ಪಾವತಿಸುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆ ತಿರಸ್ಕರಿಸಲಾಗಿದೆ ಎಂದು ತಿಳಿಸಿದರು.

ಬಾಕಿ ವೇತನ ಬಿಡುಗಡೆಗೆ ತಕ್ಷಣ ಸ್ಪಂದಿಸಿ ಆದೇಶ ಹೊರಡಿಸಿದ ಉನ್ನತ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಸಚಿವರಿಗೆ ವಿಧಾನ ಪರಿಷತ್ತಿನ ಸದಸ್ಯರಾದ ಎಸ್.ವ್ಹಿ. ಸಂಕನೂರ ಅವರು ಧನ್ಯವಾದಗಳನ್ನು ತಿಳಿಸಿದರು.

## ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗ್ರೂಪ್ 'ಎ' ಹುದ್ದೆಯ ಅರ್ಹತಾ ಪಟ್ಟಿ ಪ್ರಕಟ

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ):

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ರಾಜ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿನ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗ್ರೂಪ್ 'ಎ' ಉಳಿಕೆ ಮೂಲ ವೃಂದದ 24 (ಫಾರೆಸ್ಟ್ರಿ 11+02 ಬ್ಯಾಕ್‌ಲಾಗ್ ಮತ್ತು ನಾನ್ ಫಾರೆಸ್ಟ್ರಿ 11) ಹುದ್ದೆಗಳಿಗೆ ಮುಖ್ಯ ಪರೀಕ್ಷೆಯಿಂದ ವ್ಯಕ್ತಿತ್ವ ಪರೀಕ್ಷೆ/ಶಾರೀರಿಕ ದಾರ್ಢ್ಯತೆ ಪರೀಕ್ಷೆಗೆ 1:5 ರ ಅನುಪಾತದಲ್ಲಿ ಅರ್ಹತೆ ಪಡೆದ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಆಯೋಗದ ವೆಬ್‌ಸೈಟ್: http://kpsc.kar.nic.in/lists/eligibility ನಲ್ಲಿ ಪ್ರಕಟಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬಾಬಾಸಾಹೇಬ್ ಡಾ.ಅಂಬೇಡ್ಕರ್ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದಲ್ಲಿ ಯುಪಿಎಸ್ಸಿ / ಕೆಪಿಎಸ್ಸಿ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ):

ಬೆಂಗಳೂರು ವಿಶ್ವವಿದ್ಯಾಲಯದ ಜ್ಞಾನಭಾರತಿ ಆವರಣದಲ್ಲಿರುವ ಬಾಬಾಸಹೇಬ್ ಡಾ.ಅಂಬೇಡ್ಕರ್ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದಲ್ಲಿ 2021-22ನೇ ಸಾಲಿನ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಹಾಗೂ ರಾಜ್ಯದ ಇತರೆ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಯುಪಿಎಸ್ಸಿ/ಕೆಪಿಎಸ್ಸಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅಕ್ಟೋಬರ್ 10, 2021ರಿಂದ ತರಬೇತಿಯು ಪ್ರಾರಂಭವಾಗಲಿದ್ದು, ಅರ್ಜಿಯನ್ನು ದಿನಾಂಕ: 14-09-2021ರಿಂದ ಕೇಂದ್ರದಲ್ಲಿ ವಿತರಿಸಲಾಗುವುದು ಅಥವಾ ವಿಶ್ವವಿದ್ಯಾಲಯದ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯನ್ನು ವಿಭಾಗದ ಮುಖ್ಯಸ್ಥರಿಂದ ದೃಢೀಕರಿಸಿ ಸೆಪ್ಟೆಂಬರ್ 24 ರೊಳಗಾಗಿ ಪರೀಕ್ಷಾ ಪೂರ್ವ ತರಬೇತಿ ಕೇಂದ್ರದ ಕಚೇರಿಯಲ್ಲಿ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಬಾಬಾಸಾಹೇಬ್ ಡಾ. ಅಂಬೇಡ್ಕರ್ ಪರೀಕ್ಷಾ ಪೂರ್ವ ತರಬೇತಿ ಕೇಂದ್ರ ಬೆಂಗಳೂರು ವಿಶ್ವವಿದ್ಯಾಲಯ, ಜ್ಞಾನಭಾರತಿ ಆವರಣ, ಬೆಂಗಳೂರು-56. ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**Babasaheb Dr. Ambedkar Pre-Examination Coaching Centre,**

**UPSC/KPSC training for Civil Services**

Bengaluru, September 14 (Karnataka Information):

2021-22 academic year UPSC/KPSC training for Civil Services aspirants will be commencing from 02-10-2021 at the Babasaheb Dr. Ambedkar Pre-Examination Coaching Centre, Bangalore University.

Application will be issued in the centre or it can be downloaded from University website from 14-09-2021 onwards. Filled applications along with attestation of the Chairpersons of the respective departments should be submitted at the centre on or before 24-09-2021. Applications are invited from Bangalore University students, as well as other University students of the Karnataka state those are studying the P.G. Graduation Degree courses only.

**ಮೌಖಿಕ ಸಂದರ್ಶನದ ಅಭ್ಯರ್ಥಿಗಳ ಅರ್ಹತಾ ಪಟ್ಟಿ ಪ್ರಕಟ**

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ):

ಕರ್ನಾಟಕ ಲೋಕ ಸೇವಾ ಆಯೋಗವು 2020 ನೇ ಸಾಲಿನ ದ್ವಿತೀಯ ಅಧಿವೇಶನದ ಇಲಾಖಾ ಪರೀಕ್ಷೆಗಳ ಕನ್ನಡ ಭಾಷಾ ವಿಷಯದ ಮೌಖಿಕ ಸಂದರ್ಶನಕ್ಕೆ ಅರ್ಹರಾಗಿರುವ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್ ಸೈಟ್ http://kpsc.kar.nic.inನಲ್ಲಿ ಪ್ರಕಟಿಸಿದೆ.

ಅಭ್ಯರ್ಥಿಗಳಿಗೆ ಮೌಖಿಕ ಸಂದರ್ಶನವನ್ನು ಸೆಪ್ಟೆಂಬರ್ 15, 2021 ಮತ್ತು ಸೆಪ್ಟೆಂಬರ್ 16, 2021ರಂದು ಕಲಬುರ್ಗಿ ಕೇಂದ್ರದಲ್ಲಿ ಹಾಗೂ ಬೆಂಗಳೂರು, ಬೆಳಗಾವಿ, ಮೈಸೂರು ಮತ್ತು ಶಿವಮೊಗ್ಗ ಕೇಂದ್ರಗಳಲ್ಲಿ ಸೆಪ್ಟೆಂಬರ್ 16, 2021ರಂದು ನಡೆಸಲಿದೆ. ಮೌಖಿಕ ಸಂದರ್ಶನ ನಡೆಸಲಾಗುವ ದಿನಾಂಕ, ಸಮಯ ಮತ್ತು ಸ್ಥಳವನ್ನು ಆಯೋಗದ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಮೌಖಿಕ ಸಂದರ್ಶನದ ಸೂಚನಾ ಪತ್ರವನ್ನು ಸೆಪ್ಟೆಂಬರ್ 08, 2021 ರಿಂದ ಕರ್ನಾಟಕ ಲೋಕಸೇವ ಆಯೋಗದ ವೆಬ್ ಸೈಟ್ "http://kpsc.kar.nic.in"ನ ಹೋಂ ಪೇಜ್ ನಲ್ಲಿ Department also Examination 2020-II Session ಮೇಲೆ ಕ್ಲಿಕ್ ಮಾಡಿ ನೋಂದಣಿ ಸಂಖ್ಯೆಯನ್ನು ನಮೂದಿಸಬೇಕು. ಹಾಗೆಯೇ Verify button ಅನ್ನು ಕ್ಲಿಕ್ ಮಾಡಿದ ನಂತರ ಮೊಬೈಲ್ ಸಂಖ್ಯೆಯನ್ನು ನಮೂದಿಸಿ ಅದರಲ್ಲಿ ನಮೂದಾಗುವ ಓ.ಟಿ.ಪಿ ಸಂಖ್ಯೆಯನ್ನು ನಮೂದಿಸಬೇಕು. ನಂತರ ಪುನಃ Verify ಓ.ಟಿ.ಪಿ ಬಟನ್ ಅನ್ನು ಕ್ಲಿಕ್ ಮಾಡಬೇಕು. ತದನಂತರ ಡೌನ್ ಲೋಡ್ ಬಟನ್ ಅನ್ನು ಕ್ಲಿಕ್ ಮಾಡಿ ಸೂಚನಾ ಪತ್ರ ವನ್ನು ಮುದ್ರಿಸಿ ಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸೆಪ್ಟೆಂಬರ್ 20 ರಂದು ಸಾರಿಗೆ ಆದಾಲತ್

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ):

ಸಾರಿಗೆ ಇಲಾಖೆಯು ಹಿರಿಯ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 20 ರಂದು ಮಧ್ಯಾಹ್ನ 3.00 ಗಂಟೆಗೆ ಸಾರಿಗೆ ಆದಾಲತ್ ಕಾರ್ಯಕ್ರಮವನ್ನು ಬೆಂಗಳೂರು (ಪಶ್ಚಿಮ) ರಾಜಾಜಿನಗರ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಯ ಆವರಣದಲ್ಲಿ ಹಮ್ಮಿಕೊಂಡಿದೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಾರಿಗೆ ಆದಾಲತ್‌ನಲ್ಲಿ ಭಾಗವಹಿಸಿ ಕಛೇರಿಗೆ ಸಂಬಂಧಿಸಿದ ಕೆಲಸ ಕಾರ್ಯಗಳ ಬಗ್ಗೆ ಏನಾದರೂ ಕುಂದು ಕೊರತೆಗಳಿದ್ದಲ್ಲಿ ತಮ್ಮ ಅಹವಾಲುಗಳನ್ನು ಮಂಡಿಸಿ ಪರಿಹಾರ ಪಡೆದುಕೊಳ್ಳಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಸೆಪ್ಟೆಂಬರ್ 14, (ಕರ್ನಾಟಕ ವಾರ್ತೆ):

**ದಿನಾಂಕ: 14.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 33 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 29 | ಉತ್ತಮ | $PM_{10}$ & $PM_{2.5}$ |
| 3 | ಕವಿಕ, ಮೈಸೂರುರಸ್ತೆ | 38 | ಉತ್ತಮ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 29 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 63 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 71 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 46 | ಉತ್ತಮ | $PM_{10}$ |
| **(14.9.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 46 | ಉತ್ತಮ | $PM_{10}$ |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | 44 | ಉತ್ತಮ | $PM_{10}$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|

| | |
|---|---|
| ಉತ್ತಮ (0–50) | ಕನಿಷ್ಠ ಪರಿಣಾಮ |
| ತೃಪ್ತಿಕರ (51–100) | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| ಸಾಧಾರಣ (101–200) | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| ಕಳಪೆ (201–300) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| ಅತಿ ಕಳಪೆ (301–400) | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| ತೀವ್ರ (>401) | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 14.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 33 | Good | $PM_{10}$ |
| 2 | Jayanagar 5th Block, Shalini ground | 29 | Good | $PM_{10}$ & $PM_{2.5}$ |
| 3 | KAVIKA, Mysore Road | 38 | Good | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 29 | Good | $PM_{10}$ |
| 5 | HSR Layout, near Central Silkboard | 63 | Satisfactory | $PM_{10}$ |
| 6 | City Railway Station, Magestic, Bengaluru | 71 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 46 | Good | $PM_{10}$ |
| **(14.9.2021 at 10.05 AM)** | | | | |
| 8 | BWSSB, Kadabesanahalli | 46 | Good | $PM_{10}$ |
| 9 | Peenya | * | * | * |

| | | | | |
|---|---|---|---|---|
| 10 | BTM Layout | 44 | Good | $PM_{10}$ |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |